ಆ) ಹಾಗಿದ್ದಲ್ಲಿ ಪೈಪ್ ಲೈನ್ ಬದಲಿಸಿ ಹೊಸ ಪೈಪ್ ಲೈನ್ ಅಳವಡಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಯವರು)

ಅ) ಹೌದು

ಆ) ಸದರಿ ವಿಷಯವು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಪರಿಶೀಲನೆಯಲ್ಲಿದೆ

295 (147) ಶ್ರೀ ಅಶೋಕ ಗುರಪ್ಪ ಶಾಬಾದಿ (ಸಿಂಧಗಿ) . ಮಾನ್ಯ ಮುಖ್ಯಮಂತ್ರಿಯವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧಗಿ ಪಟ್ಟಣದಲ್ಲಿ ಒಳಚರಂಡಿ ವ್ಯವಸ್ತೆ ಇಲ್ಲದೆ ಇರುವುದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಸರ್ಕಾರ ಉದ್ದೇಶಿಸಿದೆಯೆ,

ಇ) ಉದ್ದೇಶಿಸಿದ್ದಲ್ಲಿ, ಈ ಕಾಮಗಾರಿಗಾಗಿ ಒದಗಿಸಿರುವ ಅನುದಾನವೆಷ್ಟು,

ಈ) ಯಾವಾಗ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಯವರು)

ಅ) ಹೌದು

ಆ) ಹಾದು

ಇ) ಸಿಂಗಿ ಪಟ್ಟಣದಲ್ಲಿ ಸರ್ವೆ ಕಾಮಗಾರಿಯನ್ನು ಕೈಗೊಂಡು, ವಿವರವಾದ ವಿನ್ಯಾಸಗಳನ್ನು ಹಾಗೂ ಅಂದಾಜು ಪಟ್ಟಿಯನ್ನು ತಯಾರಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ

ಆದುವರಿಂದ ಕಾಮಗಾರಿಗೆ ಅನುದಾನ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ

ಈ) ಮೇಲೆ ನಮೂದಿಸಿದಂತೆ